ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1504
ಸದಸ್ಯರ ಹೆಸರು : ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 18.03.2021

ಕ್ರ ಸಂ:	ಪ್ರಶ್ನೆ	ಉತ್ತರ
ಅ)	ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಗೂಗಲ್ ಬಿಡ್ಜ್ ಬ್ಯಾರೇಜ್ ಹತ್ತಿರ Beautification ಮಾಡುವ ಸಲುವಾಗಿ ರೂ.9.50 ಕೋಟಿ KBJNL Forest Department ವತಿಯಿಂದ ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	KBJNL Board ನಲ್ಲಿ ಮಂಜೂರಾತಿ ದೊರೆತಿದ್ದರೂ ಇನ್ನೂ ಕಾಮಗಾರಿ ಪ್ರಾರಂಭವಾಗದಿರಲು ಕಾರಣಗಳೇನು;	ಗೂಗಲ್ ಗ್ರಾಮದ ಬಳಿ ನಿರ್ಮಿಸಿರುವ ಗೂಗಲ್ ಬಿಡ್ಜ್ ಕಂ ಬ್ಯಾರೇಜ್ ಹತ್ತಿರ ವೃಕ್ಷ ಉದ್ಯಾನವನ ಹಾಗೂ ಅರಣ್ಯೀಕರಣ ನಿರ್ಮಾಣದ ಅಭಿವೃದ್ಧಿಯ ರೂ 990.00 ಲಕ್ಷ ಅಂದಾಜು ಮೊತ್ತದಲ್ಲಿ ಕಾಮಗಾರಿಗಳನ್ನು ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ಕೈಗೆತ್ತಿಕೊಳ್ಳುವ ಪ್ರಸ್ತಾವನೆಯನ್ನು ದಿನಾಂಕ:20.09.2019 ರಂದು ಜರುಗಿದ ನಿಗಮದ 122ನೇ ನಿರ್ದೇಶಕರ ಮಂಡಳಿ ಸಭೆಯಲ್ಲಿ ಚರ್ಚಿಸಲ್ಪಟ್ಟಿದ್ದು, ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ಪಡೆಯಲು ಅನುಮೋದನೆ ನೀಡಿರುತ್ತದೆ. ಪ್ರಸ್ತಾವನೆ ಕುರಿತಂತೆ ಆರ್ಥಿಕ ಇಲಾಖೆಯು ಜಲ ಸಂಪನ್ಮೂಲ ಇಲಾಖೆಯಡಿ ಈಗಾಗಲೇ ಅನುಮೋದಿಸಿದ ಕಾಮಗಾರಿಗಳ ಕಾರ್ಯಭಾರ ಅಧಿಕವಾಗಿರುವುದರಿಂದ ಪ್ರಸ್ತಾಪಿತ ಕಾಮಗಾರಿಯನ್ನು ಕೈಬಿಡುವಂತೆ ತಿಳಿಸಿದೆ.
ಇ)	ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?	

ಸಂಖ್ಯೆ: ಜಸಂಇ 42 ಡಬ್ಲ್ಯೂಬಿಎಂ 2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ